**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.41/2018**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ದ ಃಃ-

ಆರೋಪಿ ಃ ಶಿವಪುತ್ರಪ್ಪ ತಂದೆ ನಾಗಪ್ಪ ಯರಗೋಳ
ವಃ 27 ವರ್ಷ, ಉಃ ಕೂಲಿ ಕೆಲಸ
ಸಾಃ ಹುಳುಗೋಳ
ತಾಃ ಸೇಡಂ

----

**ದೋಷಾರೋಪಣೆ**

ನಾನು ಶ್ರೀ ಬಾಲು, ಬಿ.ಎ.,ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 30.03.2017 ರಂದು 06.00 ಪಿ.ಎಮ್. ಗಂಟೆ ಸುಮಾರಿಗೆ ಸೇಡಂ ಪೊಲೀಸ ಠಾಣೆಯ ಹದ್ದಿಯ ಪೈಕಿ ಹುಳುಗೋಳ ಪಿರ್ಯಾದಿಯ ಮನೆಯಲ್ಲಿ ಆಪಾದಿತನು ಚಾಸಾ 1 ನೇದ್ದವಳ ಗಂಡನಿದ್ದು ಮಾನಸಿಕವಾಗಿ ಮತ್ತು ದೈಹಿಕವಾಗಿ ಕಿರುಕುಳ ನೀಡಿದ್ದಲ್ಲದೆ ಫಿರ್ಯಾದಿಯ ಸಂಬಂದಿಕರು ಮನೆಗೆ ಬಂದಾಗ ಅವರ ಎದುರುಗಡೆ ಅವಾಚ್ಯವಾಗಿ ಬೈದು ಕಿರುಕುಳ ನೀಡಿದ್ದು ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ. ಕಲಂ 498 (ಎ) ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಎರಡನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಚಾಸಾ 1ನೇದ್ದವರೊಂದಿಗೆ ಜಗಳ ತೆಗೆದು ಅವಾಚ್ಯವಾಗಿ ಬೈದು ಕೈಯಿಂದ ಕೂದಲು ಹಿಡಿದು ಜಗ್ಗಾಡಿ ಬೆನ್ನಿನ ಮೇಲೆ ಹೊಡೆದು ಗುಪ್ತಪೆಟ್ಟು ಪಡಿಸಿದ್ದು ಆಗ ಚಾಸಾ 1 ನೇದ್ದವರು ಕೆಳಗೆ ಬಿದ್ದದ್ದು ಇರುತ್ತದೆ, ಆ ಮೂಲಕ ಭಾ.ದಂ.ಸಂ. 323 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕೊನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀನು ಚಾಸಾ 1ನೇದ್ದವರೊಂದಿಗೆ ಜಗಳ ತೆಗೆದು ರಂಡಿ ಮಗಳೆ ನೀನು ಮನೆ ಬಿಟ್ಟು ಹೋಗು ನೀನು ನನಗೆ ಇಷ್ಟವಿಲ್ಲ ಅಂತಾ ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ಶಾಂತತೆಗೆ ಭಂಗ ಉಂಟು ಮಾಡಿದ್ದು ಆ ಮೂಲಕ ಭಾ.ದಂ.ಸಂ. 504 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 29-11-2024 ಪ್ರ.ದ.ನ್ಯಾ.ದಂ. ಸೇಡಂ.

**<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.</u>**

**<u>ಸಿಸಿ ನಂ.41/2018</u>**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ದ ಃಃ-

ಆರೋಪಿ ಃ ಶಿವಪುತ್ರಪ್ಪ ತಂದೆ ನಾಗಪ್ಪ ಯರಗೋಳ
ವಃ 27 ವರ್ಷ, ಉಃ ಕೂಲಿ ಕೆಲಸ
ಸಾಃ ಹುಳುಗೋಳ
ತಾಃ ಸೇಡಂ

**<u>ಆರೋಪಿತರ ಹೇಳಿಕೆ</u>**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ

ಪ್ರಃ-2) ನಿನ್ನ ತಪ್ಪನ್ನು ಒಪ್ಪಿಕೊಳ್ಳುತ್ತಿಯೋ ಅಥವಾ ವಿಚಾರಣೆ ನಡೆಯಬೇಕಾ?

ಉಃ

(ದೋಷಾರೋಪಣೆಯನ್ನು ಆರೋಪಿತರಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕ 29-11-2024 ಪ್ರ.ದ.ನ್ಯಾ.ದಂ. ಸೇಡಂ.